ದಿಃ 30.08.2023.

OS 69/2023 PW.1

(ದಿಃ**30.08.2023** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು)

**ಪಿಡಬ್ಲ್ಯೂ-1 ರವರ ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದ**

ನಾನು ಈ ಪ್ರಕರಣದಲ್ಲಿ ವಾದಿಯಾಗಿದ್ದು, ಈ ದಿನ ನನ್ನ ಮುಖ್ಯ ವಿಚಾರಣೆಯ ಹೇಳಿಕೆಯನ್ನು ಪ್ರಮಾಣ ಪತ್ರ ರೂಪದಲ್ಲಿ ಹಾಜರುಪಡಿಸಿದ್ದೇನೆ. ಅದರಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯ ಮತ್ತು ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿ, ಸಹಿ ಮಾಡಿರುತ್ತೇನೆ.

ರಾಮಗಿರಿ ಕಾವಲ್ ಗ್ರಾಮದ ಸರ್ವೆ ನಂಬರ್ **01** ಕ್ಕೆ ಸಂಬಂಧಿಸಿದಂತೆ ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-**1** ಎಂದು ಗುರುತಿಸಲಾಯಿತು. ರಾಮಗಿರಿ ಕಾವಲ್ ಗ್ರಾಮದ ಸರ್ವೆ ನಂಬರ್ **01/2** ಪಿ**2** ಕ್ಕೆ ಸಂಬಂಧಿಸಿದಂತೆ **2000-2001** ನೇ ಸಾಲಿನಿಂದ **2001-2002** ನೇ ಸಾಲಿನ ಪಹಣಿ ಪತ್ರಿಕೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-**2** ಎಂದು ಗುರುತಿಸಲಾಯಿತು. ರಾಮಗಿರಿ ಕಾವಲ್ ಗ್ರಾಮದ ಸರ್ವೆ ನಂಬರ್ **01/22** ಕ್ಕೆ ಸಂಬಂಧಿಸಿದಂತೆ **1990-1991** ನೇಸಾಲಿನಿಂದ **1993-1994** ನೇ ಸಾಲಿನ ಪಹಣಿ ಪತ್ರಿಕೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-**3** ಎಂದು ಗುರುತಿಸಲಾಯಿತು. ಎಂ.ಆರ್.ನಂ.**134/1993-94** ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-**4** ಎಂದು ಗುರುತಿಸಲಾಯಿತು. ಎಂ.ಆರ್.ನಂ.**7/1995-96** ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-**5** ಎಂದು ಗುರುತಿಸಲಾಯಿತು. ನಮ್ಮ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-**6** ಎಂದು ಗುರುತಿಸಲಾಯಿತು.

ನನ್ನ ದಾವೆಯಲ್ಲಿ ಕೇಳಿದಂತೆ ಡಿಕ್ರಿ ಮಾಡಬೇಕಾಗಿ ಕೇಳಿಕೊಳ್ಳುತ್ತೇನೆ.

**(ಪಾಟೀ ಸವಾಲಿಗೆ ಸಮಯ ಕೋರಿದ್ದು, ಮುಂದೂಡಲಾಯಿತು)**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು,
ಹೊಳಲ್ಕೆರೆ.